6	ಹಾಸನ	32942			
7	ಹೊಳೇನರಸೀಪುರ	6691			
8	ಸಕಲೇಶಪುರ	10863			

326 ಶ್ರೀ ಯು.ಟಿ.ಖಾದರ್ (ಮಂಗಳೂರು)
ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು)

ಅ) ಮಂಗಳೂರು ಕಾರಾಗೃಹದ ನಿರ್ವಹಣೆ ಅಸಮರ್ಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇಲ್ಲ.

ಆ) ಹಾಗಿದ್ದಲ್ಲಿ, ಕೈದಿಗಳು ತೊಂದರೆ ಅನುಭವಿಸುತ್ತಿರುವುದು ನಿಜವೇ;

ಇಲ್ಲ.

ಇ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಉದ್ಭವಿಸುವುದಿಲ್ಲ.

327 ಶ್ರೀ ಖಾದರ್ ಯು.ಟಿ(ಮಂಗಳೂರು)
ಶ್ರೀ ಪಿ.ಎಂ.ನರೇಂದ್ರಸ್ವಾಮಿ (ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ತಿಂಗಳ ಗೌರವಧನ ಎಷ್ಟು?

ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವತಿಯಿಂದ ಮಾಸಿಕ ಗೌರವಧನವನ್ನು ನೀಡಲಾಗುತ್ತಿದ್ದು ವಿವರಗಳನ್ನು ಅನುಬಂಧ–1ರಲ್ಲಿ ಲಗತ್ತಿಸಿದೆ.

ಆ) ಆ ಪೈಕಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು?

ಈ ವಿವರಗಳನ್ನು ಅನುಬಂಧ–1ರಲ್ಲಿ ಒದಗಿಸಲಾಗಿದೆ.

ಇ) ಗೌರವಧನವನ್ನು ಹೆಚ್ಚಳ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಸರ್ಕಾರಿ ಆದೇಶ ಸಂಖ್ಯೆ: ಮಮಇ 292 ಐಸಿಡಿ 2008(ಭಾ) ದಿನಾಂಕ: 24–06–2009 ರಲ್ಲಿ ರಾಜ್ಯ ಸರ್ಕಾರದ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.250–00 ಹಾಗೂ ಸಹಾಯಕಿಯರಿಗೆ ರೂ.125–00 ಅನ್ನು ದಿನಾಂಕ: 01–04–2009 ರಿಂದ ಅನ್ವಯವಾಗುವಂತೆ ಹೆಚ್ಚಿಸಲಾಗಿರುತ್ತದೆ.